# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ಸಹಾಯಕ ಅಭಿಯಂತರರ ಕಛೇರಿ, ವಾರ್ಡ್ ಸಂಖ್ಯೆ: 162 (ಹೊಸ ಸಂಖ್ಯೆ: 214) ಗಿರಿನಗರ, ಬೆಂಗಳೂರು.

## ನವಂಬರ್ 2022 : ವಾರ್ಡ್ ಸಮಿತಿಯ 2ನೇ ಸಭೆಯ ನಡವಳಿಗಳು

***********

ಉಲ್ಲೇಖ : ಮಾನ್ಯ ಆಯುಕ್ತರು, ಬಿ.ಬಿ.ಎಂ.ಪಿ ರವರ ಕಛೇರಿ ಆದೇಶದ ಸಂಖ್ಯೆ: ಬಿ12(5)/ಪಿಆರ್/35/2020- 21, ದಿನಾಂಕ: 22-09-2021.

******

ದಿನಾಂಕ : 22-11-2022

ಸ್ಥಳ : ವಾರ್ಡ್ ಕಛೇರಿ, ಸ್ವಾಮಿ ವಿವೇಕಾನಂದ ಉದ್ಯಾನವನ, ಗಿರಿನಗರ

ಸಮಯ : ಪೂರ್ವಾಹ್ನ 11.00 ಗಂಟೆಗೆ

***********

ಹಾಜರಿದ್ದ ಸದಸ್ಯರು ಮತ್ತು ಅಧಿಕಾರಿಗಳ ವಿವರ

| ಕ್ರ.ಸಂ | ಹೆಸರು | ಪದನಾಮ |
|---|---|---|
| 1 | ಶ್ರೀ ಸುನಿಲ್‌ಕುಮಾರ್.ಪಿ | ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿಗಳು |
| 2 | ಶ್ರೀ ರಮೇಶ್ .ಎಂ | ಸಹಾಯಕ ಅಭಿಯಂತರರು, ಕಾರ್ಯದರ್ಶಿ ಮತ್ತು ಸಂಚಾಲಕರು ವಾರ್ಡ್-162, ಗಿರಿನಗರ |
| 3 | ಶ್ರೀಮತಿ ಆರ್. ನಾಗಮಣಿ | ಸಹಾಯಕ ಅಭಿಯಂತರರು (ಬೆಸ್ಕಾಂ) |
| 4 | ಶ್ರೀಮತಿ ಲಕ್ಷ್ಮಿದೇವಿ | ಕಿರಿಯ ಅಭಿಯಂತರರು (ಬೆಸ್ಕಾಂ) |
| 5 | ಶ್ರೀ ಮಂಜುನಾಥ್ | ಜಲ ಪರಿವೀಕ್ಷಕರು (ಬಿ.ಡಬ್ಲ್ಯೂ.ಎಸ್.ಎಸ್.ಬಿ) |
| 6 | ಶ್ರೀ ರಾಜಶೇಖರ್ | ಜಲ ಪರಿವೀಕ್ಷಕರು ಬಿ.ಡಬ್ಲ್ಯೂ.ಎಸ್.ಎಸ್.ಬಿ |
| 7 | ಶ್ರೀ ರವಿಕುಮಾರ್ .ಎಸ್ | ಕಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್-162 |
| 8 | ಶ್ರೀ ಚಂದ್ರಶೇಖರ್ | ಕಂದಾಯ ಪರಿವೀಕ್ಷಕರು |
| 9 | ಶ್ರೀ ವಸಂತ್ ಕುಮಾರ್ | ಕಂದಾಯ ವಸೂಲಿಗಾರರು |
| 10 | ಶ್ರೀ ಚೆನ್ನ ನಾಯಕ್ | ಪೋಲೀಸ್ ಹೆಡ್ ಕಾನ್ಸಟೇಬಲ್, ಗಿರಿನಗರ ಪೋಲೀಸ್ ಠಾಣೆ |
| 11 | ಶ್ರೀ ಆನಂದ್ | ಸಾರ್ವಜನಿಕರು |
| 12 | ಶ್ರೀ ಅಭಿ | ಬೀದಿ ದೀಪ ನಿರ್ವಾಹಕರು |

ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಯವರ ಅನುಮತಿಯೊಂದಿಗೆ ಕಾರ್ಯದರ್ಶಿಗಳು ಹಾಗೂ ಸಹಾಯಕ ಅಭಿಯಂತರರು ಹಾಜರಿದ್ದ ಸದಸ್ಯರೆಲ್ಲರಿಗೂ ಸ್ವಾಗತ ಕೋರಿ ಸಭೆಯನ್ನು ಪ್ರಾರಂಭಿಸಲಾಯಿತು. ಹಿಂದಿನ ವಾರ್ಡ್ ಸಮಿತಿ ಸಭೆಯ ನಡಾವಳಿಗಳು ಹಾಗೂ ಕೈಗೊಂಡ ಕ್ರಮಗಳ ಬಗ್ಗೆ ಸಭೆಯಲ್ಲಿ ವಾರ್ಡ್ ಅಭಿಯಂತರರು ವರದಿಯನ್ನು ಓದಿ ತಿಳಿಸಿದರು.

1. ಗಿರಿನಗರ 4ನೇ ಫೇಸ್, 1ನೇ ಜ ಅಡ್ಡರಸ್ತೆಯಲ್ಲಿ ಹೊಸದಾಗಿ ಬೀದಿ ದೀಪ ಅಳವಡಿಸಲು ಸಭೆಯಲ್ಲಿ ಹಾಜರಿದ್ದ ಬೀದಿ ದೀಪ ನಿರ್ವಾಹಕರಿಗೆ ಅಧ್ಯಕ್ಷರು ತಿಳಿಸಿದರು.

2. ಪ್ರತಿ ವಾರ್ಡಿನಲ್ಲೂ ನಮ್ಮ ಕ್ಲಿನಿಕ್ ಸ್ಥಾಪಿಸಲು ಸರ್ಕಾರ ಆದೇಶಿಸಿರುವ ಹಿನ್ನಲೆಯಲ್ಲಿ ಗಿರಿನಗರ ವಾರ್ಡ್‌ಗೆ ಸಂಬಂಧಪಟ್ಟಂತೆ, ಟಿ.ಆರ್. ಶಾಮಣ್ಣನಗರದಲ್ಲಿ ನಮ್ಮ ಕ್ಲಿನಿಕ್ ಕಾಮಗಾರಿ ಪ್ರಗತಿಯಲ್ಲಿರುವ ಬಗ್ಗೆ ವಾರ್ಡ್ ಅಭಿಯಂತರರು ವಾರ್ಡ್ ಸಮಿತಿಗೆ ತಿಳಿಸಿದರು.

3. ವಾರ್ಡ್ ವ್ಯಾಪ್ತಿಯಲ್ಲಿ 2022-23ನೇ ಸಾಲಿನಲ್ಲಿ ಕಂದಾಯ ತೆರಿಗೆ ವಾರ್ಷಿಕ ರೂ 900-00 ಲಕ್ಷ ಬೇಡಿಕೆ ಇದ್ದು ಈ ಇದೂವರೆಗೂ ರೂ: 730.00 ಲಕ್ಷಗಳು ವಸೂಲಾಗಿದ್ದು, ಮುಂದಿನ ದಿನಗಳಲ್ಲಿ ಬಾಕಿ ಇದ್ದ ಕಂದಾಯ ವಸೂಲಾತಿಯನ್ನು ಮಾಡಲಾಗುವುದು ಎಂದು ಕಂದಾಯ ಪರಿವೀಕ್ಷಕರು ಸಭೆಗೆ ತಿಳಿಸಿದರು.

4. ಆವಲಹಳ್ಳಿ ಬಿ.ಡಿ.ಎ ಬಡಾವಣೆ 50 ಅಡಿ ರಸ್ತೆಯಲ್ಲಿ ಪಾದಚಾರಿ ಮಾರ್ಗದ ಒತ್ತುವರಿಯನ್ನು ತೆರವುಗೊಳಿಸುವಂತೆ ವಾರ್ಡ್ ಅಭಿಯಂತರರಿಗೆ ನೋಡಲ್ ಅಧಿಕಾರಿಗಳು ತಿಳಿಸಿದರು.

5. ಗಿರಿನಗರ 80 ಅಡಿ ಮುಖ್ಯರಸ್ತೆಯಲ್ಲಿ ಪಾದಚಾರಿ ಮಾರ್ಗದ ಒತ್ತುವರಿಯನ್ನು ಸಭೆಯಲ್ಲಿ ಹಾಜರಿದ್ದ ವಾರ್ಡ್ ಅಭಿಯಂತರರು ಹಾಗೂ ಪೋಲೀಸ್ ಠಾಣೆ ಸಿಬ್ಬಂದಿಗೆ ತೆರವುಗೊಳಿಸುವಂತೆ ಅಧ್ಯಕ್ಷರು ಸೂಚಿಸಿದರು.

6. ಬಿ.ಎಸ್.ಕೆ 3ನೇ ಹಂತ, 2ನೇ ಫೇಸ್, 6ನೇ ಬ್ಲಾಕ್, 1ನೇ ಜಿ ಅಡ್ಡರಸ್ತೆಯಲ್ಲಿ ಬಿಬಿಎಂಪಿ ವತಿಯಿಂದ ರಸ್ತೆ ಬದಿ ಚರಂಡಿ ಅಭಿವೃದ್ಧಿ ಕಾಮಗಾರಿ ಕೈಗೊಂಡಿದ್ದು, ಗುತ್ತಿಗೆದಾರರಾದ ಶ್ರೀ ಮಂಜುನಾಥ್ ರವರು ಉತ್ತಮ ಗುಣಮಟ್ಟದ ಕಾಮಗಾರಿ ನಿರ್ವಹಿಸುತ್ತಿರುವ ಬಗ್ಗೆ ಸಭೆಯಲ್ಲಿ ಹಾಜರಿದ್ದ ಸಾರ್ವಜನಿಕರು ಪ್ರಶಂಸೆಯನ್ನು ವ್ಯಕ್ತಪಡಿಸಿದರು.

7. ಗಿರಿನಗರ ವಾರ್ಡ್ ವ್ಯಾಪ್ತಿಯಲ್ಲಿ 47 ಕಟ್ಟಡಗಳಿಗೆ ವಸತಿಯೇತರ ಉದ್ದೇಶಕ್ಕಾಗಿ ಬೆಸ್ಕಾಂ ವತಿಯಿಂದ ಸಂಪರ್ಕ ಕಲ್ಪಿಸಿಕೊಂಡಿದ್ದು, ಇವರಲ್ಲಿ 27 ಕಟ್ಟಡಗಳ ಮಾಲೀಕರು ಕಂದಾಯವನ್ನು ವಸತಿ ಉಪಯೋಗಕ್ಕಾಗಿ ಎಂದು ನಮೂದಿಸಿ, ಕಂದಾಯ ಪಾವತಿಸಿರುವುದು ಕಂಡುಬಂದಿರುತ್ತದೆ. ಆದ್ದರಿಂದ, ಸದರಿ 27 ಕಟ್ಟಡಗಳಿಗೆ ನೋಟೀಸ್ ಜಾರಿ ಮಾಡಿ ವ್ಯತ್ಯಾಸದ ಕಂದಾಯ ಮೊತ್ತವನ್ನು ವಸೂಲಿ ಮಾಡಲು ಕ್ರಮಕೈಗೊಳ್ಳಲಾಗುವುದು ಎಂದು ಸಭೆಯಲ್ಲಿ ಹಾಜರಿದ್ದ ಕಂದಾಯ ಪರಿವೀಕ್ಷಕರು ಅಧ್ಯಕ್ಷರಿಗೆ ತಿಳಿಸಿದರು.

8. ಗಿರಿನಗರ ವಾರ್ಡ್ ವ್ಯಾಪ್ತಿಯಲ್ಲಿ ನಿವೃತ್ತಿ ಹೊಂದಿರುವ ಪೌರಕಾರ್ಮಿಕರ ಜಾಗಕ್ಕೆ ಬದಲಿ ಪೌರಕಾರ್ಮಿಕರನ್ನು ನೇಮಿಸುವ ವ್ಯವಸ್ಥೆ ಮಾಡಲು ಕ್ರಮಕೈಗೊಳ್ಳಲು ಸಭೆಯಲ್ಲಿ ಹಾಜರಿದ್ದ ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ಅಧ್ಯಕ್ಷರು ತಿಳಿಸಿದರು.

"ವಂದನೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು'.

22/11/2022

ಕಾರ್ಯದರ್ಶಿಗಳು
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ: 162 (214), ಗಿರಿನಗರ

ಅಧ್ಯಕ್ಷರು
ಹಾಗೂ ನೋಡಲ್ ಅಧಿಕಾರಿಗಳು
ವಾರ್ಡ್ ಸಂಖ್ಯೆ: 162 (214), ಗಿರಿನಗರ

ಪ್ರತಿಯನ್ನು:

1. ಮಾನ್ಯ ಮುಖ್ಯ ಆಯುಕ್ತರು, ಬೃ.ಬೆ.ಮ.ಪಾಲಿಕೆ, ಎನ್. ಆರ್. ವೃತ್ತ ರವರ ಮಾಹಿತಿಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
2. ವಲಯ ಆಯುಕ್ತರು ( ದಕ್ಷಿಣ) ರವರ ಮಾಹಿತಿಗಾಗಿ ಸಲ್ಲಿಸಿದೆ.
3. ಮಾನ್ಯ ವಿಶೇಷ ಆಯುಕ್ತರು (ಆಡಳಿತ) ರವರ ಮಾಹಿತಿಗಾಗಿ ಸಲ್ಲಿಸಿದೆ.
4. ಮಾನ್ಯ ವಿಶೇಷ ಆಯುಕ್ತರು (ಆರೋಗ್ಯ & ಘ.ತ್ಯಾ.ನಿ) ರವರ ಮಾಹಿತಿಗಾಗಿ ಸಲ್ಲಿಸಿದೆ.
5. ಮುಖ್ಯ ಅಭಿಯಂತರರು (ದಕ್ಷಿಣ) ರವರ ಮಾಹಿತಿಗಾಗಿ ಸಲ್ಲಿಸಿದೆ.
6. ಕಾರ್ಯಪಾಲಕ ಅಭಿಯಂತರರು, ಬಸವನಗುಡಿ ರವರ ಮಾಹಿತಿಗಾಗಿ ಕಳುಹಿಸಿದೆ.
7. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಸವನಗುಡಿ ರವರ ಮುಂದಿನ ಕ್ರಮಕ್ಕಾಗಿ ಕಳುಹಿಸಿದೆ.
8. ವಾರ್ಡ್ ಸಮಿತಿ ಸದಸ್ಯರ ಮಾಹಿತಿಗಾಗಿ ಕಳುಹಿಸಿದೆ.
9. ಕಚೇರಿ ಪ್ರತಿ.